All India Radio: Bangalore
Regional Bulletin In Kannada
28.10.2025 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<><><><>

ಮುಖ್ಯಾಂಶಗಳು

೧. ಸಾರ್ವಜನಿಕ ಸ್ಥಳಗಳಲ್ಲಿ ಕಾರ್ಯಕ್ರಮ ನಿರ್ಬಂಧ ಆದೇಶಕ್ಕೆ ಹೈಕೋರ್ಟ್ ತಡೆ - ವಿಭಾಗೀಯ ಪೀಠಕ್ಕೆ ಮೇಲ್ಮನವಿ ಸಲ್ಲಿಸಲು ಸರ್ಕಾರ ನಿರ್ಧಾರ

೨. ಮುಖ್ಯಮಂತ್ರಿ ಬದಲಾವಣೆ ಮಾತು ಅಪ್ರಸ್ತುತ ; ಸಚಿವ ಕೆ.ಎಚ್. ಮುನಿಯಪ್ಪ

೩. ಸುರಂಗ ಮಾರ್ಗಕ್ಕೆ ಲಾಲ್‌ಬಾಗ್‌ನ ೬ ಎಕರೆ ಭೂಮಿ ಬಳಕೆ ಇಲ್ಲ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

೪. ಉದ್ಯೋಗಾಧಾರಿತ ಅಪ್ರೆಂಟಿಶಿಪ್ ಪದವಿ ಶಿಕ್ಷಣ ರಾಜ್ಯದೆಲ್ಲಡೆ ವಿಸ್ತರಣೆ - ಸಚಿವ ಡಾ. ಎಂ.ಸಿ. ಸುಧಾಕರ್

೫. ಯು.ಟಿ. ಖಾದರ್ ಅವಧಿಯಲ್ಲಿ ಭ್ರಷ್ಟಾಚಾರ ಆರೋಪ ಕುರಿತು ನ್ಯಾಯಮೂರ್ತಿಗಳಿಂದ ತನಿಖೆ ಅಗತ್ಯ - ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ

***********

ರಾಜ್ಯಾದ್ಯಂತ ಸಾರ್ವಜನಿಕ ಸ್ಥಳಗಳು ಮತ್ತು ಸರ್ಕಾರಿ ಸ್ವಾಮ್ಯದ ಆವರಣದಲ್ಲಿ ಸಾರ್ವಜನಿಕ ಕಾರ್ಯಕ್ರಮಗಳನ್ನು ನಡೆಸಲು ಪೂರ್ವಾನುಮತಿ ಕಡ್ಡಾಯಗೊಳಿಸಿದ ತನ್ನ ಆದೇಶಕ್ಕೆ ಮಧ್ಯಂತರ ತಡೆಯಾಜ್ಞೆಯನ್ನು ಪ್ರಶ್ನಿಸಿ ರಾಜ್ಯ ಸರ್ಕಾರ ಹೈಕೋರ್ಟ್ ವಿಭಾಗೀಯ ಪೀಠದ ಮುಂದೆ ಮೇಲ್ಮನವಿ ಸಲ್ಲಿಸಲು ನಿರ್ಧರಿಸಿದೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಹೈಕೋರ್ಟ್‌ನ ಧಾರವಾಡ ಪೀಠವು ಸರ್ಕಾರದ ನಿರ್ದೇಶನಕ್ಕೆ ತಡೆಯಾಜ್ಞೆ ನೀಡಿದೆ ಎಂದು ಹೇಳಿದರು. ತೀರ್ಪಿನ ವಿರುದ್ಧ ಮೇಲ್ಮನವಿ ಅರ್ಜಿ ಸಲ್ಲಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ರಾಷ್ಟ್ರೀಯ ಸ್ವಯಂ ಸೇವಕ ಸಂಘದ ವಿರುದ್ಧ ರಾಜ್ಯ ಸರ್ಕಾರ ತೆಗೆದುಕೊಂಡ ನಿರ್ಧಾರ ಸಂವಿಧಾನ ವಿರೋಧಿಯಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿದ್ದರು.

***********

ಮುಖ್ಯಮಂತ್ರಿ, ಸಚಿವರ ಬದಲಾವಣೆ ಬಗ್ಗೆ ಮಾತನಾಡುವುದು ಅಪ್ರಸ್ತುತ, ನಾವೆಲ್ಲ ಶಿಸ್ತಿನ ಸಿಪಾಯಿಗಳಾಗಿದ್ದು, ಪಕ್ಷದ ಹೈಕಮಾಂಡ್ ತೀರ್ಮಾನಕ್ಕೆ ಬದ್ಧವಾಗಿದ್ದು, ಗೊಂದಲಕ್ಕೆ ಒಳಗಾಗುವುದು ಬೇಡ ಎಂದು ಸಚಿವ ಕೆ.ಎಚ್.ಮುನಿಯಪ್ಪ ಹೇಳಿದರು. ಕೋಲಾರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಪೂರ್ಣ ಪ್ರಮಾಣದ ಅಧಿಕಾರದಲ್ಲಿ ಮುಂದುವರೆಯಲಿದ್ದಾರೆ. ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಸಚಿವರು ಸೇರಿ ರಾಜ್ಯವನ್ನು ಮುನ್ನಡೆಸಿಕೊಂಡು ಹೋಗುತ್ತಿದ್ದಾರೆ ಎಂದರು.

***********

ಟನಲ್ ರಸ್ತೆಗೆ ಲಾಲ್ ಬಾಗ್ ನಲ್ಲಿ ಆರು ಎಕರೆ ಭೂಮಿಯನ್ನು ಬಳಸಿಕೊಳ್ಳುವುದಿಲ್ಲ. ಲಾಲ್ ಬಾಗನ ಮೂಲೆಯಲ್ಲಿ ಟನಲ್ ರಸ್ತೆ ಪ್ರವೇಶ ಹಾಗೂ ನಿರ್ಗಮನಕ್ಕೆ ಅವಕಾಶ ನೀಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಕೆಪಿಸಿಸಿ ಕಚೇರಿಯ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನ ಸಂಚಾರ ದಟ್ಟಣೆ ನಿವಾರಣೆಗೆ ಸಂಸದ ತೇಜಸ್ವಿ ಸೂರ್ಯ ಅವರು ಕೊಟ್ಟ ಸಲಹೆಗಳಲ್ಲಿ ಪರ್ಯಾಯ ಪರಿಹಾರಗಳು ಕಾಣಲಿಲ್ಲ. ಆದರೂ ಅವರ ಸಲಹೆಗಳನ್ನು ಗೌರವಿಸಿ ಅವುಗಳನ್ನು ಪರಿಶೀಲಿಸಲು ಅಧಿಕಾರಿಗಳಿಗೆ ಸೂಚಿಸಲಾಗುವುದು. ಇದರ ಜೊತೆಗೆ ಅವರು ನೀಡಿರುವ ಇತರೆ ಸಲಹೆಗಳನ್ನು ಅಧಿಕಾರಿಗಳ ಜೊತೆ ಚರ್ಚಿಸಲಾಗುವುದು ಎಂದರು.

***********

ರಾಜ್ಯದಲ್ಲಿ ಕಳೆದ ವರ್ಷ ಆರಂಭಿಸಿದ್ದ ಉದ್ಯೋಗಾಧಾರಿತವಾದ ಅಪ್ರೆಂಟಿಸ್‌ಶಿಪ್ ಪದವಿ ಶಿಕ್ಷಣ ಹಂತ ಹಂತವಾಗಿ ರಾಜ್ಯದ ಎಲ್ಲೆಡೆ ವಿಸ್ತರಿಸಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ ಸುಧಾಕರ್ ತಿಳಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ಪಟ್ಟಣದಲ್ಲಿಂದು ನೂತನವಾಗಿ ನಿರ್ಮಿಸಲಾಗಿರುವ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇದು ವಿಶಿಷ್ಟವಾದ ಪದವಿ ಕಾರ್ಯಕ್ರಮವಾಗಿದ್ದು, ಉದ್ಯೋಗಾವಕಾಶ ಇರುವ ವಿಷಯಗಳನಿಟ್ಟುಕೊಂಡು ಸುಮಾರು ೪ ವಿಭಾಗಗಳಲ್ಲಿ ಕಳೆದ ವರ್ಷ ೪೪ ಕಾಲೇಜುಗಳಲ್ಲಿ ಪದವಿ ಆರಂಭಿಸಲಾಗಿದೆ. ಈ ವರ್ಷ ಸುಮಾರು ೬೮ ಕಾಲೇಜುಗಳಿಗೆ ವಿಸ್ತರಣೆ ಮಾಡಲಾಗಿದ್ದು, ೨ ಸಾವಿರದ ೮೦೦ ವಿದ್ಯಾರ್ಥಿಗಳು ದಾಖಲಾತಿ ಮಾಡಿಕೊಂಡಿದ್ದಾರೆ ಎಂದರು. ಈ ಪದವಿ ಮುಗಿಸಿ ಹೊರ ಬರುವ ವಿಧ್ಯಾರ್ಥಿಗಳು ನೇರವಾಗಿ ಉದ್ಯೋಗ ಮಾಡಲು ಅರ್ಹರಾಗಿರುತ್ತಾರೆ ಎಂದು ತಿಳಿಸಿದರು.

ಧ್ವನಿ : ಡಾ: ಎಂ.ಸಿ ಸುಧಾಕರ್. ಉನ್ನತ ಶಿಕ್ಷಣ ಸಚಿವರು (೩೫ ಸೇಕೆಂಡ್)

***********

ಸ್ಪೀಕರ್ ಯು.ಟಿ.ಖಾದರ್ ಅವರ ಅವಧಿಯಲ್ಲಿ ವಿವಾದ, ಗೊಂದಲ, ಭ್ರಷ್ಟಾಚಾರದ ಆರೋಪಗಳು ಕೇಳಿಬಂದಿವೆ ಎಂದು ಸಂಸದ ಮತ್ತು ರಾಜ್ಯ ವಿಧಾನಸಭೆಯ ಮಾಜಿ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಆರೋಪಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ಪೀಕರ್ ಸ್ಥಾನದ ವಿರುದ್ಧ ಬಂದಿರುವ ಆರೋಪಗಳಿಂದ ಆ ಸ್ಥಾನವು ಮುಕ್ತವಾಗಬೇಕು. ಇದಕ್ಕಾಗಿ ಕಾರ್ಯನಿರತ ನ್ಯಾಯಮೂರ್ತಿಗಳಿಂದ ಆರೋಪಗಳ ಕುರಿತು ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು. ರಾಜ್ಯದಲ್ಲಿ ವಿಧಾನಸಭಾಧ್ಯಕ್ಷರಾಗಿ ರಾಜಕೀಯ, ಸಾರ್ವಜನಿಕ ಜೀವನದ ಸಾಕಷ್ಟು ಅನುಭವ ಇರುವ ಯು.ಟಿ.ಖಾದರ್ ಅವರು ಇದ್ದು, ಸ್ಪೀಕರ್ ಹುದ್ದೆಯ ಘನತೆ, ಗೌರವಕ್ಕೆ ತಕ್ಕಂತೆ ನಡೆದುಕೊಳ್ಳುತ್ತಿಲ್ಲ ಎಂದು ಆರೋಪಿಸಿದ ಅವರು, ಖಾದರ್ ಪಕ್ಷಪಾತಿಯಾಗಿದ್ದಾರೆ. ಆಡಳಿತ ಸುಧಾರಣೆ ಹೆಸರಿನಲ್ಲಿ ಅನೇಕ ಭ್ರಷ್ಟಾಚಾರಗಳು ನಡೆಯುತ್ತಿವೆ ಎಂದು ದೂರಿದರು.

***********

ಕಲಬುರಗಿಯಲ್ಲಿ ಪಿಎಂ ಮಿತ್ರ ಪಾರ್ಕ್ ಯೋಜನೆಯನ್ನು ತ್ವರಿತವಾಗಿ ಅನುಷ್ಠಾನಕ್ಕೆ ತರಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜವಳಿ ಸಚಿವ ಶಿವಾನಂದ ಪಾಟೀಲ್, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಕಾರ್ಯದರ್ಶಿ ರೋಹಿಣಿ ಸಿಂದೂರಿ ಅವರಿಗೆ ಸೂಚಿಸಿದ್ದಾರೆ. ರಾಜ್ಯದಲ್ಲಿ ಘಟಕ ಸ್ಥಾಪನೆಗೆ ಜವಳಿ ಉದ್ಯಮಿಗಳ ಆಕರ್ಷಣೆಗೆ ಅಗತ್ಯ ನೆರವು ಕೋರಿ ಶೀಘ್ರದಲ್ಲಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಲಿದ್ದು, ಮಧ್ಯಪ್ರದೇಶ, ತಮಿಳುನಾಡು ಸೇರಿದಂತೆ ವಿವಿಧ ರಾಜ್ಯಗಳಲ್ಲಿನ ನೀತಿಯ ವರದಿ ಸಿದ್ದಪಡಿಸುವಂತೆ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಬಾಂಗ್ಲಾ ದೇಶದಲ್ಲಿನ ಪ್ರತಿಕೂಲ ಪರಿಸ್ಥಿತಿ ಪರಿಣಾಮ ಅಲ್ಲಿನ ಜವಳಿ ಉದ್ಯಮ ಬೇರೆಡೆಗೆ ಸ್ಥಳಾಂತರವಾಗುತ್ತಿದ್ದು, ಅಲ್ಲಿನ ಉದ್ಯಮಿಗಳನ್ನು ಕರ್ನಾಟಕಕ್ಕೆ ಸೆಳೆಯುವ ನಿಟ್ಟಿನಲ್ಲಿ ಏನು ಮಾಡಬೇಕು ಎಂದು ಅಧ್ಯಯನ ಮಾಡಿ ವರದಿ ನೀಡುವಂತೆ ಅವರು ಸೂಚನೆ ನೀಡಿದ್ದಾರೆ.

***********

ಮಂಡ್ಯ ಜಿಲ್ಲೆಯಲ್ಲಿನ ಮಕ್ಕಳು ಮತ್ತು ವಿದ್ಯಾರ್ಥಿಗಳಿಗೆ ಪರಿಸರ ಮಾಲಿನ್ಯದಿಂದಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವುದು ಬಹಳ ಅಗತ್ಯ ಎಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದ್ದಾರೆ. ಮಂಡ್ಯ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಹಯೋಗದೊಂದಿಗೆ ಇಂದು

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ೫೦ ವರ್ಷಗಳ ಸಾರ್ಥಕ ಪಯಣದ ಹಿನ್ನಲೆಯಲ್ಲಿ  ಮಂಡ್ಯ ವಿಶ್ವವಿದ್ಯಾಲಯದ ಮೈದಾನದಲ್ಲಿ ಆಯೋಜಿಸಲಾದ "ಸುವರ್ಣ ಮಹೋತ್ಸವ" ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಮಂಡ್ಯ ಜಿಲ್ಲೆಯಲ್ಲಿನ ಬೃಹತ್, ಮಧ್ಯಮ ಮತ್ತು ಸಣ್ಣ ಕಾರ್ಖಾನೆಗಳಿಂದ ಉತ್ಪತ್ತಿಯಾಗುವ ತ್ಯಾಜ್ಯ ನೀರನ್ನು ಸಂಸ್ಕರಿಸಲು ಶುದ್ಧೀಕರಣ ಘಟಕವನ್ನು ಅಳವಡಿಸಿಕೊಳ್ಳುವಂತೆ ಸೂಚಿಸಲಾಗಿದೆ. ಸಂಸ್ಕರಿಸಿದ ನೀರನ್ನು ಕಾರ್ಖಾನೆಯ ಆವರಣದಲ್ಲಿ ಹಾಗೂ ಕೈಗಾರಿಕೆ ಚಟುವಟಿಕೆಗೆ ಉಪಯೋಗಿಸಿಕೊಳ್ಳಲಾಗುತ್ತಿದೆ. ಕಾರ್ಖಾನೆಯ ಆವರಣದಿಂದ ತ್ಯಾಜ್ಯ ನೀರನ್ನು ಹೊರಬಿಡದಂತೆ ನಿರ್ಬಂಧ ವಿಧಿಸಲಾಗುತ್ತಿದೆ ಎಂದು ಅವರು ಹೇಳಿದ್ದಾರೆ.

***********

ಒಬ್ಬ ಕವಿ ಕಾಲಾನಂತರದಲ್ಲಿಯೂ ಇಂದಿನ ಯುವಕರು ಕಥೆ, ಕಾವ್ಯವನ್ನು ಕಟ್ಟುವಂತಹ ರೀತಿಯಲ್ಲಿ ಬದುಕಿದ್ದರು. ಆ ಎಲ್ಲ ಪ್ರಸಂಗಗಳು ಮಾನವೀಯ ನೆಲೆಯೊಳಗೆ ಇರುವಂತಹವುಗಳು ಮತ್ತು ಬದುಕಿನ ಮೌಲ್ಯಗಳನ್ನು ಬಹಳಷ್ಟು ಗಾಢವಾಗಿ ತಮ್ಮ ಸಾಹಿತ್ಯದ ಮೂಲಕ ತೋರಿಸಿಕೊಟ್ಟವರು ಬೇಂದ್ರೆಯವರು ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಡಾ. ಮಲ್ಲಿಕಾ ಘಂಟಿ ಅವರು ಅಭಿಪ್ರಾಯಪಟ್ಟರು.  ಡಾ.ದ.ರಾ.ಬೇಂದ್ರೆ ರಾಷ್ಟ್ರೀಯ ಸ್ಮಾರಕ ಟ್ರಸ್ಟ್, ಧಾರವಾಡ ವತಿಯಿಂದ ನಡೆದ ವರಕವಿ ಡಾ.ದ.ರಾ.ಬೇಂದ್ರೆ ಅವರ ೪೪ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬೇಂದ್ರೆಯವರು ಮತ್ತು ಬಸವರಾಜ ಕಟ್ಟೀಮನಿಯವರ ಒಡನಾಟವನ್ನು ಸ್ಮರಿಸುತ್ತ ಬೇಂದ್ರೆಯವರ ಸಾಹಿತ್ಯವನ್ನು ಸ್ಪರ್ಶಿಸುವುದು, ಅವರ ಕಾವ್ಯವನ್ನು ಪ್ರವೇಶಿಸುವುದು ಸಾಮಾನ್ಯವಾದುದಲ್ಲ ಎಂದು ಹೇಳಿದರು.  ಟ್ರಸ್ಟ್ ಅಧ್ಯಕ್ಷ ಡಾ. ಸರಜೂ ಕಾಟ್ಕರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

***********

ಸರ್ಕಾರವು ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಅವಕಾಶವಾಗುವಂತೆ ಅಗತ್ಯ ಅನುದಾನ ನೀಡಲು ಕ್ರಮವಹಿಸಲಿದೆ. ಜಿಲ್ಲೆಯಲ್ಲಿ ವಿವಿಧ ಇಲಾಖೆಗಳು ತಮ್ಮ ವ್ಯಾಪ್ತಿಯಲ್ಲಿ ಹಮ್ಮಿಕೊಳ್ಳಲು ಉದ್ದೇಶಿಸಿರುವ ಅಗತ್ಯ ಕಾಮಗಾರಿ, ಕಾರ್ಯಕ್ರಮಗಳನ್ನು ಯೋಜನಾ ವರದಿಯಲ್ಲಿ ಸೇರಿಸಬೇಕು. ಯೋಜನಾ ವರದಿ ಜಿಲ್ಲೆಯ ಸಮಗ್ರ ಅಭಿವೃದ್ಧಿಯ ಮುನ್ನೋಟವಾಗಬೇಕು ಎಂದು ಕಾರ್ಮಿಕ ಇಲಾಖೆ ಸಚಿವ ಸಂತೋಷ ಲಾಡ್  ಹೇಳಿದ್ದಾರೆ.

***********

ಹಾವೇರಿ ಜಿಲ್ಲೆಯಲ್ಲಿ ಆನ್‌ಲೈನ್ ವೇದಿಕೆಗಳ ಮೂಲಕ ವ್ಯಾಪಾರ-ವಹಿವಾಟು ನಡೆಯುತ್ತಿದ್ದು, ಆನ್‌ಲೈನ್ ಮೂಲಕ ಸಾಕಷ್ಟು ವಸ್ತುಗಳನ್ನು ಬರುತ್ತಿವೆ. ಇಂಥ ವಸ್ತುಗಳ ಜೊತೆಯಲ್ಲಿ ಮಾದಕವಸ್ತು ಸಾಗಣೆ ಆಗುವ ಸಂಭವವಿರುವುದರಿಂದ ಕೋರಿಯರ್ ಏಜೆನ್ಸಿಗಳು ಹಾಗೂ ಮಳಿಗೆಗಳ ಮೇಲೆ ತೀವ್ರ ನಿಗಾ ವಹಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವಿಜಯಮಹಾಂತೇಶ ದಾನಮ್ಮನವರ ಸೂಚಿಸಿದ್ದಾರೆ.  ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಏರ್ಪಡಿಸಿದ್ದ 'ನಾರ್ಕೋ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು,

***********

ಮಾದಕ ವಸ್ತುಗಳಿಂದ ಯುವ ಜನತೆ, ಶಾಲಾ ಮಕ್ಕಳು ಮಾದಕ ವ್ಯಸನಿಗಳಾಗಿ ಬದುಕು ಹಾಳು ಮಾಡಿಕೊಳ್ಳುತ್ತಿದ್ದಾರೆ ಮಾದಕ ವಸ್ತುಗಳು ಜಿಲ್ಲೆಗೆ ಬಾರದಂತೆ ಕಟ್ಟುನಿಟ್ಟಿನ ಕ್ರಮವಹಿಸ ಬೇಕೆಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಹೇಳಿದರು.

***********